# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದ ಅಭಿವೃದ್ಧಿಗಾಗಿ ಸಮಗ್ರ ಯೋಜನೆಯನ್ನು ರೂಪಿಸಿ ಅನುಷ್ಠಾನಗೊಳಿಸಲು ಅಭಿವೃದ್ಧಿ ಮಂಡಳಿಯನ್ನು ರಚಿಸುವ ಬಗ್ಗೆ.

- - - - -

1. ಸರ್ಕಾರದ ಆದೇಶ ಸಂಖ್ಯೆ ಪಿಹೆಚ್‌ಎಸ್ ಎಸ್‌ಇಡಬ್ಲ್ಯು 65 ದಿನಾಂಕ:01-02-1966 ಇದರಲ್ಲಿ 49 ವಿವಿಧ ಅಲೆಮಾರಿ ಮತ್ತು ಅರೆ ಅಲೆಮಾರಿ ಸಮಾಜದವರ ಪಟ್ಟಿಯನ್ನು ಮಾಡಲಾಗಿದೆ. ಇದರ ಪೈಕಿ (1) ಸುಡುಗಾಡು ಸಿದ್ಧ, (2) ಮಾದರಿ ಮತ್ತು (3) ಹಂದಿಜೋಗಿ ಇವರನ್ನು ಪರಿಶಿಷ್ಟ ಜಾತಿ ಪಟ್ಟಿಗೆ ವರ್ಗಾಯಿಸಲಾಗಿದೆ. ಆದರೆ, ಈ ಜನಾಂಗದವರು ಪ್ರಸ್ತುತ ಸರ್ಕಾರಿ ಆದೇಶ 30.03.2002 ರಲ್ಲಿ ಹಿಂದುಳಿದ ವರ್ಗಗಳಲ್ಲಿ ಪ್ರವರ್ಗ -1 ರಲ್ಲಿ ಸೇರಿರುತ್ತಾರೆ.

2. 2011-12ನೇ ಸಾಲಿನ ಆಯವ್ಯಯದಲ್ಲಿ ಅಲೆಮಾರಿ ಮತ್ತು ಅರೆ ಅಲೆಮಾರಿ ಬುಡಕಟ್ಟು ಜನರಿಗಾಗಿ ಒಂದು ಹೊಸ ಸಮಗ್ರ ಅಭಿವೃದ್ಧಿ ಯೋಜನೆಯನ್ನು ಕೈಗೊಳ್ಳಲಾಗುವುದು ಮತ್ತು ಉದ್ದೇಶಕ್ಕಾಗಿ ರೂ. 5.00 ಕೋಟಿಗಳನ್ನು ಮೀಸಲಿರಿಸಲಾಗಿದೆ ಎಂದು ಘೋಷಿಸಲಾಗಿದೆ.

3. ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದವರು ಹಿಂದುಳಿದ ವರ್ಗಗಳ ಪೈಕಿ ಅತ್ಯಂತ ಹಿಂದುಳಿದವರಾಗಿದ್ದು, ಅವರ ಅಭಿವೃದ್ಧಿಗಾಗಿ ಪರಿಣಾಮಕಾರಿಯಾಗಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಅನುಕೂಲವಾಗುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ರಾಜ್ಯ ಮಟ್ಟದಲ್ಲಿ ಒಂದು "ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ಮಂಡಳಿ" ಯನ್ನು ಸ್ಥಾಪಿಸಲು ಪ್ರಸ್ತಾಪಿಸಲಾಗಿದೆ. ಆದ್ದರಿಂದ, ಅಲೆಮಾರಿ-ಅರೆಅಲೆಮಾರಿ ಜನಾಂಗದ ಅಭಿವೃದ್ಧಿಗಾಗಿ ಯೋಜನೆಗಳನ್ನು ರೂಪಿಸಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ತೀರ್ಮಾನಿಸಿ ಈ ಕೆಳಕಂಡ ಆದೇಶ ನೀಡಲಾಗಿದೆ.

## ಸರ್ಕಾರಿ ಆದೇಶ ಸಂಖ್ಯೆ: ಸಕಇ 186 ಬಿಎಂಎಸ್ 2011, ಬೆಂಗಳೂರು, ದಿನಾಂಕ:16.07.2011

4. ಅಲೆಮಾರಿ-ಅರೆಅಲೆಮಾರಿ ಜನಾಂಗದ ಅಭಿವೃದ್ಧಿಗಾಗಿ ಯೋಜನೆಗಳನ್ನು ರೂಪಿಸಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಈ ಕೆಳಕಂಡ ಸದಸ್ಯರನ್ನೊಳಗೊಂಡ "ಕರ್ನಾಟಕ ಅಲೆಮಾರಿ ಮತ್ತು ಅರೆಅಲೆಮಾರಿ ಅಭಿವೃದ್ಧಿ ಮಂಡಳಿ"ಯನ್ನು ರಚಿಸಲಾಗಿದೆ.

| | | |
|---|---|---|
| 1. | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ | ಅಧ್ಯಕ್ಷರು |
| 2. | ಸರ್ಕಾರದ ಕಾರ್ಯದರ್ಶಿಗಳು, ಕಂದಾಯ ಇಲಾಖೆ | ಸದಸ್ಯರು |
| 3. | ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸದಸ್ಯರು |
| 4. | ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆ | ಸದಸ್ಯರು |
| 5. | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ | ಸದಸ್ಯರು |
| 6 | ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ | ಸದಸ್ಯರು |
| 7. | ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ | ಸದಸ್ಯರು |

| | | |
|---|---|---|
| 8. | ವ್ಯವಸ್ಥಾಪಕ ನಿರ್ದೇಶಕರು, ರಾಜೀವ ಗಾಂಧಿ ಗ್ರಾಮೀಣ ವಸತಿ ನಿಗಮ | ಸದಸ್ಯರು |
| 9. | ನಿರ್ದೇಶಕರು, ದೇವರಾಜ ಅರಸು ಸಂಶೋಧನಾ ಸಂಸ್ಥೆ | ಸದಸ್ಯರು |
| 10. | ವ್ಯವಸ್ಥಾಪಕ ನಿರ್ದೇಶಕರು, ಡಿ ದೇವರಾಜ ಅರಸು ಅಭಿವೃದ್ಧಿ ನಿಗಮ ನಿಯಮಿತ | ಸದಸ್ಯರು |
| 11. | ಅಲೆಮಾರಿ/ಅರೆ ಅಲೆಮಾರಿ ಜನಾಂಗದ 4 ಪ್ರತಿನಿಧಿಗಳು (ಸರ್ಕಾರದಿಂದ ನಾಮ ನಿರ್ದೇಶಿತರಾದವರು) | ಸದಸ್ಯರು |
| 12. | ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | ಸದಸ್ಯ ಕಾರ್ಯದರ್ಶಿ |

5. ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗಗಳ ಸಮಗ್ರ ಅಭಿವೃದ್ಧಿಗಾಗಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಕೈಗೊಳ್ಳಬಹುದಾಗಿದೆ.

(1) ಗುಂಪು ಮನೆಗಳನ್ನು ನಿರ್ಮಿಸಿ ವಸತಿ ಸೌಕರ್ಯ ಕಲ್ಪಿಸುವುದು.
(2) ಆರ್ಥಿಕ ಸಬಲೀಕರಣ – ಸಹಾಯಧನ ನೀಡಿ ಸಾಲಸೌಲಭ್ಯ ಒದಗಿಸುವುದು ಮತ್ತು ತರಬೇತಿ, ಕೌಶಲ್ಯಗಳನ್ನು ವೃದ್ಧಿಗೊಳಿಸುವುದು.
(3) ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹ ನೀಡುವುದು.
(4) ಸಾಮಾಜಿಕ ಮತ್ತು ಆರೋಗ್ಯ ಸುಧಾರಣೆ.
(5) ಸಾಂಸ್ಕೃತಿಕ ಉನ್ನತೀಕರಣ ಮಾಡುವುದು.

6. ಮೇಲ್ಕಂಡ ಸಮಿತಿಯು ಅಲೆಮಾರಿ–ಅರೆಅಲೆಮಾರಿ ಜನಾಂಗದ ಅಭಿವೃದ್ಧಿಗಾಗಿ ಯೋಜನೆಗಳನ್ನು ಮತ್ತು ಮಾರ್ಗಸೂಚನೆಗಳನ್ನು ರೂಪಿಸುವುದು ಮತ್ತು ಅನುಷ್ಠಾನದ ಮೇಲ್ವಿಚಾರಣೆ ಮಾಡುವುದು. ಈ ಯೋಜನೆಯ ಅನುಷ್ಠಾನಕ್ಕೆ ತಗಲುವ ರೂ. 5.00 ಕೋಟಿ ವೆಚ್ಚವನ್ನು ಲೆಕ್ಕಶೀರ್ಷಿಕೆ 2225-03-800-0-12 ಅಡಿಯಲ್ಲಿ ಭರಿಸತಕ್ಕದ್ದು. ಈ ಆದೇಶವನ್ನು ಸಚಿವ ಸಂಪುಟದ ಅನುಮೋದನೆಯನ್ನು ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಎಂ.ಥಾಮಸ್)
ಸರ್ಕಾರದ ಅಧೀನ ಕಾರ್ಯದರ್ಶಿ–3,
ಸಮಾಜ ಕಲ್ಯಾಣ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆ.
5) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ
6) ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ.

ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ.

8) ವ್ಯವಸ್ಥಾಪಕ ನಿರ್ದೇಶಕರು, ರಾಜೀವ ಗಾಂಧಿ ಗ್ರಾಮೀಣ ವಸತಿ ನಿಗಮ.

9) ನಿರ್ದೇಶಕರು, ದೇವರಾಜ ಅರಸು ಸಂಶೋಧನಾ ಸಂಸ್ಥೆ.

10) ವ್ಯವಸ್ಥಾಪಕ ನಿರ್ದೇಶಕರು, ಡಿ ದೇವರಾಜ ಅರಸು ಅಭಿವೃದ್ಧಿ ನಿಗಮ ನಿಯಮಿತ.

11) ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು

12) ಎಲ್ಲಾ ಜಿಲ್ಲಾಧಿಕಾರಿಗಳು

13) ಎಲ್ಲಾ ಜಿಲ್ಲಾ ಪಂಚಾಯ್ತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.

14) ಎಲ್ಲಾ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಅಧಿಕಾರಿಗಳು.

15) ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ,

16) ಶಾಖಾ / ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು

ಸಂಖ್ಯೆ: ಹಿಂವಕನಿ/ಅನುಜ-1/ಸಿಆರ್-41/2010-11. ದಿನಾಂಕ: 18/7/2011

ಪ್ರತಿಯನ್ನು ಮಾಹಿತಿಗಾಗಿ
ಹಾಗೂ ಸೂಕ್ತ ಕ್ರಮಕ್ಕಾಗಿ
ಸಂಬಂಧಪಟ್ಟವರಿಗೆ
ಕಳುಹಿಸಿಕೊಡಲಾಗಿದೆ.

ಆಯುಕ್ತರ ಪರವಾಗಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು